# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು
**(ಯಾಂತ್ರಿಕ ಇಲಾಖೆ)**

ಸಂಖ್ಯೆ: ಕರಾಸಾ/ಕೇಕ/ಯಾಂ/ 1111 /2024-25

ದಿನಾಂಕ:- 09-10-2024

**ಎಲ್ಲಾ ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು**,
ಕ.ರಾ.ರ.ಸಾ.ನಿಗಮ.
**ಕಾರ್ಯ ವ್ಯವಸ್ಥಾಪಕರು,**
ಕ.ರಾ.ರ.ಸಾ.ನಿಗಮ,
ಪ್ರಾದೇಶಿಕ ಕಾರ್ಯಗಾರ,
ಬೆಂಗಳೂರು ಮತ್ತು ಹಾಸನ.

ಮಾನ್ಯರೆ,

ವಿಷಯ:- ದಿನಾಂಕ:- 11.10.2024 ರಂದು ನಿಗಮದ ಎಲ್ಲಾ ವಾಹನ ಹಾಗೂ ಯಂತ್ರೋಪಕರಣಗಳಿಗೆ ಆಯುಧ ಪೂಜೆ ಆಚರಣೆ ಮಾಡಲು ದರ ಪರಿಷ್ಕರಿಸಿರುವ ಬಗ್ಗೆ.

ಉಲ್ಲೇಖ:- 1)ಸಕ್ಷಮ ಪ್ರಾಧಿಕಾರಿಗಳ ಆದೇಶ
2)ಸಂಖ್ಯೆ:ಕರಾಸಾ/ಕೇಕ/ಯಾಂ/1110/2024-25 ದಿನಾಂಕ:- 08-10-2024

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷವು ನಾಡಹಬ್ಬ ಮೈಸೂರು ದಸರಾ ಪ್ರಯುಕ್ತ ಆಚರಣೆಯಲ್ಲಿರುವ ಆಯುಧ ಪೂಜೆಯ ದಿನದಂದು ನಿಗಮದ ವಾಹನಗಳು ಮತ್ತು ಯಂತ್ರೋಪಕರಣಗಳನ್ನು ಸುಸ್ಥಿತಿಯಲ್ಲಿಟ್ಟು ಪೂಜೆ ಮಾಡುವುದು ಸಂಪ್ರದಾಯವಿದ್ದು ಉಲ್ಲೇಖಿತ ಪತ್ರ 2 ರಲ್ಲಿ ವಿಭಾಗಗಳಲ್ಲಿ ಕಾರ್ಯಾಚರಣೆಯಲ್ಲಿರುವ ಪ್ರತಿ ಪ್ರಯಾಣಿಕ ಹಾಗೂ ಇಲಾಖಾ ವಾಹನದ ಪೂಜಾ ಕಾರ್ಯಕ್ಕೆ **ರೂ. 100/-** (ನೂರು ರೂಪಾಯಿಗಳು ಮಾತ್ರ) ರಂತೆ ಮುಂಗಡ ಹಣ ಪಡೆದು ಸ್ವಚ್ಛತೆಯೊಂದಿಗೆ ವಾಹನಗಳ ಮತ್ತು ಯಂತ್ರೋಪಕರಣಗಳ ಪೂಜೆ ಮಾಡುವಂತೆ ಸೂಚಿಸಲಾಗಿತ್ತು.

ಮುಂದುವರೆದಂತೆ, ಮಾನ್ಯ ವ್ಯವಸ್ಥಾಪಕ ನಿರ್ದೇಶಕರ ಆದೇಶದಂತೆ ವಿಭಾಗಗಳಲ್ಲಿ ಕಾರ್ಯಾಚರಣೆಯಲ್ಲಿರುವ ಪ್ರತಿ ಪ್ರಯಾಣಿಕ ಹಾಗೂ ಇಲಾಖಾ ವಾಹನದ ಪೂಜಾ ಕಾರ್ಯಕ್ಕೆ ದರವನ್ನು ಪರಿಷ್ಕರಿಸಿ **ರೂ. 250/-** (ಎರಡು ನೂರ ಐವತ್ತು ರೂಪಾಯಿಗಳು ಮಾತ್ರ) ಅನ್ನು ನಿಗದಿಪಡಿಸಿರುವುದರಿಂದ, ಅದರಂತೆ ಮುಂಗಡ ಹಣ ಪಡೆದು ಸ್ವಚ್ಛತೆಯೊಂದಿಗೆ ವಾಹನಗಳ/ಯಂತ್ರೋಪಕರಣಗಳ ಪೂಜಾ ಕಾರ್ಯಗಳನ್ನು ನೆರವೇರಿಸುವಂತೆ ಸೂಚಿಸಲಾಗಿದೆ.

ಉಳಿದಂತೆ, ಉಲ್ಲೇಖಿತ ಪತ್ರ (2) ರಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

9/10/24

**ಮುಖ್ಯ ಯಾಂತ್ರಿಕ ಅಭಿಯಂತರರು(ಪ್ರ)**

**ಪ್ರತಿಯನ್ನು:-**

1. ಹಿರಿಯ ಆಪ್ತ ಕಾರ್ಯದರ್ಶಿ, ವ್ಯವಸ್ಥಾಪಕ ನಿರ್ದೇಶಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ ರವರ ಮಾಹಿತಿಗಾಗಿ ಹಾಗೂ ಸದರಿ ವಿಷಯವನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರ ಗಮನಕ್ಕೆ ತರಲು ಕಳುಹಿಸಲಾಗಿದೆ.
2. ಹಿರಿಯ ಆಪ್ತ ಕಾರ್ಯದರ್ಶಿ, ನಿರ್ದೇಶಕರು (ಸಿ&ಜಾ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ ರವರ ಮಾಹಿತಿಗಾಗಿ ಹಾಗೂ ಸದರಿ ವಿಷಯವನ್ನು ಮಾನ್ಯ ನಿರ್ದೇಶಕರವರ ಗಮನಕ್ಕೆ ತರಲು ಕಳುಹಿಸಲಾಗಿದೆ.
3. ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
4. ಎಲ್ಲಾ ಇಲಾಖಾ ಮುಖ್ಯಸ್ಥರು/ಉಸ್ತುವಾರಿ ಅಧಿಕಾರಿಗಳು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ ರವರ ಮಾಹಿತಿಗಾಗಿ ಕಳುಹಿಸಲಾಗಿದೆ.